ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಟಿ.ರವಿ ಇವರು ನಿಯಮ-72 ಗಮನ ಸೆಳೆಯುವ ಸೂಚನೆ ಸಂಖ್ಯೆ 196 ಗೆ ಸಂಬಂಧಿಸಿದಂತೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಉತ್ತರ.

*****

ಸೂಚನೆ :

ಗ್ರಾಮ ಪಂಚಾಯತಿಯಲ್ಲಿ ಕನಿಷ್ಠ ವೇತನ ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹಾಗೂ ವಾಟರ್ ಆಪರೇಟರ್‌ಗಳು ಮತ್ತು ಸಿಬ್ಬಂದಿಗಳನ್ನು BPL card (ಪಡಿತರ ಚೀಟಿ) ವ್ಯಾಪ್ತಿಗೆ ಪರಿಗಣಿಸುವ ಕುರಿತು.

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಿ ಪತ್ರಕ್ಕೆ ಸಂಬಂಧಿಸಿದಂತೆ ಗ್ರಾಮ ಪಂಚಾಯತಿಗಳ ಸಿಬ್ಬಂದಿ ವರ್ಗದವರಾದಂತಹ ಕರವಸೂಲಿಗಾರರು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್/ವಾಟರ್ ಆಪರೇಟರ್, ಸ್ವಚ್ಛತಾಗಾರರು ಹಾಗೂ ಜವಾನರು ಅನುಮೋದನೆಗೊಂಡ ಕನಿಷ್ಠ ವೇತನ ಪಡೆದು ಕಾರ್ಯನಿರ್ವಹಿಸುತ್ತಾರೆ ಹಾಗೂ ಸರ್ಕಾರ ನೀಡುವ ಯಾವುದೇ ಸೌಲಭ್ಯ ಅವರಿಗೆ ಇರುವುದಿಲ್ಲ. ಸದರಿ ಸಿಬ್ಬಂದಿಗಳು ಕಾರ್ಮಿಕ ನೌಕರರು ಆಗಿರುವುದರಿಂದ ಹಾಗೂ ಕನಿಷ್ಠ ವೇತನ ಪರಿಷ್ಕೃತಗೊಂಡಂತೆ ವೇತನ ದರದಲ್ಲಿ ಬದಲಾವಣೆಯಾಗುತ್ತಿದ್ದು ಆದರೆ ವಾರ್ಷಿಕ ಆದಾಯ 1,20,000/-ರೂ.ಗಳು ಮೀರಿದೆ ಎಂದು ಕೆಲವು ಜಿಲ್ಲೆಗಳಲ್ಲಿ ಸಿಬ್ಬಂದಿಗಳ ಪಡಿತರ ಚೀಟಿಗಳನ್ನು ರದ್ದು ಮಾಡುತ್ತಿರುವುದರಿಂದ ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ತುಂಬಾ ತೊಂದರೆಯಾಗುತ್ತಿದೆ.

ಹಲವಾರು ಸಂದರ್ಭಗಳಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳ ಆರೋಗ್ಯದ ಸಮಸ್ಯೆ ಉಂಟಾದಾಗ ಮತ್ತು ನೌಕರರ ಮಕ್ಕಳ ಶಿಕ್ಷಣಕ್ಕೆ ಪಡಿತರ ಚೀಟಿಯನ್ನು ಬಳಕೆ ಮಾಡಲು ತೀವ್ರ ತೊಂದರೆಯಾಗುತ್ತಿರುವ ಕಾರಣದಿಂದ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಅವಕಾಶ ನೀಡಿ ಬಿಪಿಎಲ್ ಕಾರ್ಡ್ (ಪಡಿತರ ಚೀಟಿ) ವ್ಯಾಪ್ತಿಗೆ ಒಳಪಡಿಸಲು ಅಗತ್ಯ ಕ್ರಮಕ್ಕಾಗಿ ಮಾನ್ಯ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

ಉತ್ತರ:

ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.

1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.

...2

2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.
3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್ ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.
4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.

ಪ್ರಸ್ತುತ ಸನ್ನಿವೇಶ ಮತ್ತು ಪ್ರಸ್ತುತ ಸರ್ಕಾರದ ಆದೇಶಗಳಂತೆ ಹಾಗೂ ಮೇಲ್ಕಂಡ ಮಾನದಂಡಗಳ ಆಧಾರದ ಮೇರೆಗೆ ಆದ್ಯತಾ ಪಡಿತರ ಚೀಟಿ ವಿತರಣೆ ಮಾಡಲಾಗುತ್ತಿದೆ. ಈ ಮಾನದಂಡಗಳ ಅಡಿಯಲ್ಲಿ ಗ್ರಾಮ ಪಂಚಾಯಿತಿ ನೌಕರರು/ಅಧಿಕಾರಿ/ಸಿಬ್ಬಂದಿಗಳಿಗೆ ಆದ್ಯತಾ ಪಡಿತರ ಚೀಟಿ ನೀಡಲು ಅವಕಾಶವಿರುವುದಿಲ್ಲ.

ಆಡಳಿತ ಸುಧಾರಣಾ ಆಯೋಗವು ತಮ್ಮ 2ನೇ ವರದಿಯಲ್ಲಿ ಬದಲಾಗುತ್ತಿರುವ ಆರ್ಥಿಕ ಪರಿಸ್ಥಿತಿ ಹಿನ್ನೆಲೆಯಲ್ಲಿ ಆದ್ಯತಾ ಪಡಿತರ ಚೀಟಿ ಪಡೆಯಲು ಪರಿಷ್ಕೃತ ಮಾನದಂಡಗಳನ್ನು ಶಿಫಾರಸ್ಸು ಮಾಡಿದ್ದು, ವಾರ್ಷಿಕ ಆದಾಯದ ಮಿತಿಯನ್ನು ರೂ.3.00 ಲಕ್ಷಕ್ಕೆ ಹೆಚ್ಚಿಸಲು ಶಿಫಾರಸ್ಸು ಮಾಡಿರುತ್ತಾರೆ.

ಇ-ಆನಾಸ 112 ಡಿಆರ್‌ಎ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು